ನೇರವಾಗಿ ಕರ್ನಾಟಕ ಲೋಕ ಸೇವಾ ಆಯೋಗದಿಂದ 1668 ನೇಮಕ ಮಾಡಲಾಗಿದೆ. ಎಲ್ಲಾ ನಿರುದ್ಯೋಗಿ ಬಿ.ಎಡ್./ಬಿ.ಪಿ.ಎಡ್. ಪದವೀಧರರನ್ನು ನೇಮಕ ಮಾಡಲು ಸರ್ಕಾರಕ್ಕೆ ಸಾಧ್ಯವಾಗುವುದಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಉಡುಪಿ ಸರ್ಕಾರಿ ಹೆರಿಗೆ ಆಸ್ಪತ್ರೆಗೆ ಶ್ರೀ ಹಾಜಿ ಅಬ್ದುಲ್ಲಾ ಸಾಹೇಬರ ಹೆಸರು ನಾಮಕರಣ

1575 (1796) ಶ್ರೀ ಯು. ಆರ್. ಸಭಾಪತಿ (ಉಡುಪಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉಡುಪಿಯ ಸರ್ಕಾರಿ ಹೆಂಗಸರ ಮತ್ತು ಮಕ್ಕಳ ಆಸ್ಪತ್ರೆಯ ನಿವೇಶನವನ್ನು ಸರ್ಕಾರಕ್ಕೆ ಹಾಜಿ ಅಬ್ದುಲ್ಲಾ ಸಾಹೇಬರು ಉಚಿತವಾಗಿ ನೀಡಿರುವುದು ನಿಜವೇ?

ಆ) ಹಾಗಿದ್ದಲ್ಲಿ, ಆ ಆಸ್ಪತ್ರೆಗೆ ಹಾಜಿ ಅಬ್ದುಲ್ಲಾ ಸಾಹೇಬ್ ಸ್ಮಾರಕ ಸರ್ಕಾರಿ ಹೆಂಗಸರ ಮತ್ತು ಮಕ್ಕಳ ಆಸ್ಪತ್ರೆ ಎಂದು ನಾಮಕರಣ ಮಾಡಲಾಗಿದೆಯೇ?

ಇ) ಹಾಗಿಲ್ಲದಿದ್ದಲ್ಲಿ, ನಾಮಕರಣ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಈ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಎಂದು ಕ್ರಮ ತೆಗೆದುಕೊಳ್ಳುವುದು?

ಡಾ॥ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹೌದು

ಆ) ಇಲ್ಲ

ಇ) ಇಲ್ಲ

ಈ) ಈ ಬಗ್ಗೆ ಸಂಬಂಧಿಸಿದ ಸಂಸ್ಥೆಯಿಂದ ಕೋರಿಕೆ ಬಂದಲ್ಲಿ ನಿಯಮಾನುಸಾರ ಪರಿಶೀಲಿಸಲಾಗುವುದು

ಸಿಂದಗಿ ಪಟ್ಟಣದಲ್ಲಿ ಆಸ್ಪತ್ರೆ ಕಟ್ಟಡ ನವೀಕರಣ

Building Construction

1576 (1983) Sri. Sunigar Sharanappa Thippanna (Sindhgi) : Will the Ministers for Health and Family Welfare be pleased to state?

a) Whether sanction has been given for renovation of Hospital of Sindhgi and for construction of Generator Room in its premises?

b) If so, its estimated cost and the expenditure incurred?

c) Whether the work is completed? If not, when will it be completed?